# ದಾವಣಗೆರೆ ವಿಶ್ವವಿದ್ಯಾನಿಲಯ

ವಿಶ್ವವಿದ್ಯಾನಿಲಯ ಕಾರ್ಯಾಲಯ, ಶಿವಗಂಗೋತ್ರಿ, ದಾವಣಗೆರೆ-577007

ಸ್ವಾತಂತ್ರ್ಯದ ಅಮೃತಮಹೋತ್ಸವ

## ಸಿಂಡಿಕೇಟ್ ವಿಶೇಷ ಸಭೆಯ ನಡಾವಳಿಗಳು

## ದಿನಾಂಕ:17.12.2022

# ದಾವಣಗೆರೆ ವಿಶ್ವವಿದ್ಯಾನಿಲಯ

**ವಿಶ್ವವಿದ್ಯಾನಿಲಯ ಕಾರ್ಯಾಲಯ, ಶಿವಗಂಗೋತ್ರಿ, ದಾವಣಗೆರೆ-577007**

ದೂರವಾಣಿ ಸಂಖ್ಯೆ: 08192-208029, ಫ್ಯಾಕ್ಸ್ ಸಂಖ್ಯೆ: 08192-208008


**ಃ ವಿದ್ಯಾದಾನೇನ ವರ್ಧತೆ, ವಿದ್ಯಾ ವಿನಯೇನ ಶೋಭತೆ, ವಿದ್ಯಯಾ ವಿಂದತೆ ಅಮಅಮೃತಂ ಃ**

ಸಂಖ್ಯೆ:ದಾವಿವಿ/ಪ್ರಾಧಿಕಾರ/ಸಿಂ/172/2022-23/3729 ದಿನಾಂಕ:22.12.2022

ಗೆ,

**ಮಾನ್ಯ ಸಿಂಡಿಕೇಟ್ ಸದಸ್ಯರುಗಳಿಗೆ.**

ಮಾನ್ಯರೆ,

**ವಿಷಯ : ದಿನಾಂಕ:17.12.2022 ರಂದು ಜರುಗಿದ ಸಿಂಡಿಕೇಟ್ ವಿಶೇಷ ಸಭೆಯ ನಡಾವಳಿಗಳು.**

****

ವಿಶ್ವವಿದ್ಯಾನಿಲಯ ಪ್ರಾಧಿಕಾರಗಳ ನಿರ್ವಹಣೆ ಮತ್ತು ವ್ಯವಹಾರಗಳ ಅಧಿನಿಯಮಗಳು ಅಧ್ಯಾಯ - III ರ ಪ್ರಕರಣ 16(i) ರ ರೀತ್ಯ ದಿನಾಂಕ:17.12.2022 ರಂದು ಜರುಗಿದ ಸಿಂಡಿಕೇಟ್ ವಿಶೇಷ ಸಭೆಯ ನಡಾವಳಿಗಳನ್ನು ಈ ಮೂಲಕ ತಮಗೆ ಕಳುಹಿಸಲಾಗಿದೆ.

ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ ಅಧಿನಿಯಮ, 2000 ರಡಿ ರಚಿಸಲಾಗಿರುವ ಪ್ರಾಧಿಕಾರಗಳ ನಿರ್ವಹಣೆ ಮತ್ತು ವ್ಯವಹಾರಗಳ ಅಧಿನಿಯಮಗಳು - ಅಧ್ಯಾಯ-III ರ ಪ್ರಕರಣ 16(i)ರ ರೀತ್ಯ ನಡಾವಳಿ ತಲುಪಿದ ಏಳು ದಿನಗಳೊಳಗಾಗಿ ತಮ್ಮಿಂದ ನಡಾವಳಿಗಳ ದಾಖಲಾತಿಯ ಬಗ್ಗೆ ಯಾವುದೇ ಆಕ್ಷೇಪಣೆ ಬಾರದಿದ್ದಲ್ಲಿ ನಡಾವಳಿಗಳ ದಾಖಲಾತಿಯು ಸರಿಯಾಗಿದೆಯೆಂದು ಭಾವಿಸಲಾಗುವುದು.

ತಮ್ಮ ವಿಶ್ವಾಸಿ,

ಕುಲಸಚಿವರು
ದಾವಣಗೆರೆ ವಿಶ್ವವಿದ್ಯಾನಿಲಯ
ಶಿವಗಂಗೋತ್ರಿ, ದಾವಣಗೆರೆ-577007.

ಗೆ,

ಮಾನ್ಯ ಸಿಂಡಿಕೇಟ್ ಸದಸ್ಯರುಗಳಿಗೆ,

**ಪ್ರತಿಗಳು:**

1. ಮಾನ್ಯ ರಾಜ್ಯಪಾಲರ ಕಾರ್ಯದರ್ಶಿಗಳು, ಕರ್ನಾಟಕ ರಾಜ್ಯಪಾಲರ ಸಚಿವಾಲಯ, ರಾಜಭವನ, ಬೆಂಗಳೂರು-560 001.
2. ಸರ್ಕಾರದ ಮುಖ್ಯ ಕಾರ್ಯದರ್ಶಿಗಳು, ಕರ್ನಾಟಕ ಸರ್ಕಾರ, ವಿಧಾನಸೌಧ, ಬೆಂಗಳೂರು- 560 001.
3. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಉನ್ನತ ಶಿಕ್ಷಣ ಇಲಾಖೆ (ವಿಶ್ವವಿದ್ಯಾನಿಲಯಗಳು), ಬಹುಮಹಡಿಗಳ ಕಟ್ಟಡ, ಬೆಂಗಳೂರು
4. ಆಯುಕ್ತರು, ಕಾಲೇಜು ಶಿಕ್ಷಣ ಇಲಾಖೆ, ಕರ್ನಾಟಕ ಸರ್ಕಾರ, ನೃಪತುಂಗ ರಸ್ತೆ, ಬೆಂಗಳೂರು.
5. ಎಲ್ಲಾ ಸಿಂಡಿಕೇಟ್ ಸದಸ್ಯರುಗಳಿಗೆ, ದಾವಣಗೆರೆ ವಿಶ್ವವಿದ್ಯಾನಿಲಯ, ಶಿವಗಂಗೋತ್ರಿ, ದಾವಣಗೆರೆ.
6. ಕುಲಸಚಿವರು (ಪರೀಕ್ಷಾಂಗ), ದಾವಣಗೆರೆ ವಿಶ್ವವಿದ್ಯಾನಿಲಯ, ಶಿವಗಂಗೋತ್ರಿ, ದಾವಣಗೆರೆ.
7. ಹಣಕಾಸು ಅಧಿಕಾರಿಗಳು, ದಾವಣಗೆರೆ ವಿಶ್ವವಿದ್ಯಾನಿಲಯ, ಶಿವಗಂಗೋತ್ರಿ, ದಾವಣಗೆರೆ.
8. ನಿಕಾಯಗಳ ಡೀನರುಗಳು, ದಾವಣಗೆರೆ ವಿಶ್ವವಿದ್ಯಾನಿಲಯ, ಶಿವಗಂಗೋತ್ರಿ, ದಾವಣಗೆರೆ.
9. ಗ್ರಂಥಪಾಲಕರು, ದಾವಣಗೆರೆ ವಿಶ್ವವಿದ್ಯಾನಿಲಯ, ಶಿವಗಂಗೋತ್ರಿ, ದಾವಣಗೆರೆ.
10. ಕಾರ್ಯನಿರ್ವಾಹಕ ಇಂಜಿನಿಯರ್, ದಾವಣಗೆರೆ ವಿಶ್ವವಿದ್ಯಾನಿಲಯ, ಶಿವಗಂಗೋತ್ರಿ, ದಾವಣಗೆರೆ.
11. ಉಪಕುಲಸಚಿವರು, ಶೈಕ್ಷಣಿಕ/ಮಾಸನಿ/ಅಭಿವೃದ್ಧಿ ವಿಭಾಗ, ದಾವಣಗೆರೆ ವಿಶ್ವವಿದ್ಯಾನಿಲಯ, ಶಿವಗಂಗೋತ್ರಿ, ದಾವಣಗೆರೆ.
12. ನಿರ್ದೇಶಕರು, ಸಿ.ಡಿ.ಸಿ/ಐಕ್ಯೂಎಸಿ/ಪಿ.ಎಂ.ಇ./ದೈಹಿಕ ಶಿಕ್ಷಣ, ದಾವಣಗೆರೆ ವಿಶ್ವವಿದ್ಯಾನಿಲಯ, ಶಿವಗಂಗೋತ್ರಿ, ದಾವಣಗೆರೆ.
13. ಪ್ರಾಂಶುಪಾಲರು, ವಿಶ್ವವಿದ್ಯಾನಿಲಯ, ದೃಶ್ಯಕಲಾ ಕಾಲೇಜು, ದಾವಣಗೆರೆ-577004
14. ನಿರ್ದೇಶಕರು, ವಿಶ್ವವಿದ್ಯಾನಿಲಯ ಸ್ನಾತಕೋತ್ತರ ಕೇಂದ್ರ, ರಾ.ಹೆ.13, ಗುಡ್ಡದ ರಂಗವ್ವನಹಳ್ಳಿ, ಚಿತ್ರದುರ್ಗ-577502
15. ಸಂಯೋಜನಾಧಿಕಾರಿಗಳು, ವಿಶ್ವವಿದ್ಯಾನಿಲಯದ ಸರ್ಕಾರಿ ಪ್ರಥಮ ದರ್ಜೆ ಘಟಕ ಕಾಲೇಜು, ತುರುವನೂರು, ಚಿತ್ರದುರ್ಗ-577517
16. ಸಂಯೋಜನಾಧಿಕಾರಿಗಳು, ವಿಶ್ವವಿದ್ಯಾನಿಲಯದ ಸರ್ಕಾರಿ ಪ್ರಥಮ ದರ್ಜೆ ಘಟಕ ಕಾಲೇಜು, ಹರಿಯಬ್ಬೆ, ಚಿತ್ರದುರ್ಗ-577546
17. ಆಪ್ತ ಕಾರ್ಯಾಲಯ, ಮಾನ್ಯ ಕುಲಪತಿಗಳು/ಕುಲಸಚಿವರು, ದಾವಣಗೆರೆ ವಿಶ್ವವಿದ್ಯಾನಿಲಯ, ಶಿವಗಂಗೋತ್ರಿ, ದಾವಣಗೆರೆ.
18. ಕಛೇರಿ ಪ್ರತಿ.

# ದಾವಣಗೆರೆ ವಿಶ್ವವಿದ್ಯಾನಿಲಯ

ವಿಶ್ವವಿದ್ಯಾನಿಲಯ ಕಾರ್ಯಾಲಯ, ಶಿವಗಂಗೋತ್ರಿ, ದಾವಣಗೆರೆ-577007

## ವಿಶ್ವವಿದ್ಯಾನಿಲಯದಲ್ಲಿ ದಿನಾಂಕ:17.12.2022ರಂದು ಜರುಗಿದ ಸಿಂಡಿಕೇಟ್ ವಿಶೇಷ ಸಭೆಯ ನಡಾವಳಿಗಳು

**ಸಭೆಯಲ್ಲಿ ಹಾಜರಿದ್ದ ಸದಸ್ಯರು:**

1. ಪ್ರೊ. ಬಿ.ಡಿ ಕುಂಬಾರ., ಮಾನ್ಯ ಕುಲಪತಿಗಳು. : ಅಧ್ಯಕ್ಷರು
2. ಶ್ರೀ ಎಂ.ವಿ.ಮಲ್ಲಿಕಾರ್ಜುನ ಮಾಡಾಳ್, ಮಾನ್ಯ ರಾಜ್ಯಪಾಲರಿಂದ ನಾಮನಿರ್ದೇಶಿತರು : ಸದಸ್ಯರು
3. ಕುಮಾರಿ ಗೀತಾ ಜಿ., ಮಾನ್ಯ ರಾಜ್ಯಪಾಲರಿಂದ ನಾಮನಿರ್ದೇಶಿತರು : ಸದಸ್ಯರು
4. ಪ್ರೊ. ರಾಮಲಿಂಗಪ್ಪ, ಡೀನರು, ವಿಜ್ಞಾನ ನಿಕಾಯ : ಸದಸ್ಯರು
5. ಪ್ರೊ. ರಂಗಪ್ಪ ಕೆ.ಬಿ., ಪ್ರಾಧ್ಯಾಪಕರು : ಸದಸ್ಯರು
6. ಡಾ. ರವಿ ಟಿ.ಎಸ್., ಪ್ರಾಚಾರ್ಯರು : ಸದಸ್ಯರು
7. ಡಾ. ನಾಗರಾಜ ಜಿ.ಯು., ಪ್ರಾಚಾರ್ಯರು : ಸದಸ್ಯರು
8. ಡಾ. ದಾಸಯ್ಯ ಜಿ., ಪ್ರಾಚಾರ್ಯರು : ಸದಸ್ಯರು
9. ಡಾ. ಪ್ರೇಮಾ ಪಿ.ಎಂ., ಪ್ರಾಚಾರ್ಯರು : ಸದಸ್ಯರು
10. ಪ್ರೊ. ಶಿವಶಂಕರ್ ಕೆ., ಕುಲಸಚಿವರು (ಪರೀಕ್ಷಾಂಗ). : ಸದಸ್ಯರು
11. ಪ್ರೊ. ಸರೋಜ ಬಿ.ಬಿ., ಕುಲಸಚಿವರು. : ಸದಸ್ಯ ಕಾರ್ಯದರ್ಶಿ

ನಿಯಮಾನುಸಾರ ಕನಿಷ್ಠ ಅಗತ್ಯ ಸಂಖ್ಯೆ 8ಕ್ಕಿಂತ ಹೆಚ್ಚು ಅಂದರೆ 11 ಜನ ಸದಸ್ಯರುಗಳು ಹಾಜರಿರುವುದನ್ನು ಖಚಿತಪಡಿಸಿಕೊಂಡು ನಿಗದಿತ ಸಮಯಕ್ಕೆ ಸರಿಯಾಗಿ ಸಭೆಯನ್ನು ಪ್ರಾರಂಭಿಸಲಾಯಿತು. ಮೊದಲನೆಯದಾಗಿ ಮಾನ್ಯ ಕುಲಪತಿಗಳು ಸಭೆಯಲ್ಲಿ ಹಾಜರಿದ್ದ ಎಲ್ಲಾ ಸದಸ್ಯರುಗಳಿಗೆ ಸ್ವಾಗತವನ್ನು ಕೋರಿದರು. ನಂತರ ಸಭೆಯ ಕಲಾಪಗಳನ್ನು ಈ ಮುಂದಿನಂತೆ ಪ್ರಾರಂಭಿಸಲಾಯಿತು.

ಕುಲಸಚಿವರು

ಕುಲಪತಿಗಳು

| ಪ್ರಾಧಿಕಾರಗಳ ವಿಭಾಗ | |
|---|---|
| ವಿಷಯ ಸಂಖ್ಯೆ: | ಸಿ.01(a)/(12/22) |

# –ಃಟಿಪ್ಪಣಿಃ–

ವಿಷಯಃ ರಾಜ್ಯದ ಉನ್ನತ ಶಿಕ್ಷಣ ಇಲಾಖೆಯ ವ್ಯಾಪ್ತಿಗೊಳಪಡುವ ವಿಶ್ವವಿದ್ಯಾನಿಲಯಗಳು ಮತ್ತು ಉನ್ನತ ಶಿಕ್ಷಣ ಸಂಸ್ಥೆಗಳಲ್ಲಿ ಬೋಧಕ ಹುದ್ದೆಗಳನ್ನು ಭರ್ತಿಮಾಡಿಕೊಳ್ಳುವ ಸಂಬಂಧ ಮಾದರಿ ಪರಿನಿಯಮಗಳ ಅನುಮೋದನೆ ಬಗ್ಗೆ.

**ಪ್ರಸ್ತಾವನೆ:**

ಯುಜಿಸಿ ಸಂಸ್ಥೆಯು ವಿಶ್ವವಿದ್ಯಾನಿಲಯದ ಹಾಗೂ ಉನ್ನತ ಶಿಕ್ಷಣ ಸಂಸ್ಥೆಗಳಲ್ಲಿ, ಯುಜಿಸಿ ವೇತನ ಶ್ರೇಣಿಗಳಡಿ ಕಾರ್ಯ ನಿರ್ವಹಿಸುತ್ತಿರುವ ಎಲ್ಲಾ ಬೋಧಕರಿಗೆ ಹಾಗೂ ಬೋಧಕೇತರ ಅಧಿಕಾರಿಗಳಿಗೆ ದಿನಾಂಕ:01.01.2016 ರಿಂದ ಅನ್ವಯವಾಗುವಂತೆ 7ನೇ ಯುಜಿಸಿ ಪರಿಷ್ಕೃತ ಶ್ರೇಣಿಗಳನ್ನು ಯುಜಿಸಿ ಪತ್ರ ಸಂಖ್ಯೆ:F.No.23-4/2017(PS), Dated:31.01.2018 ಜಾರಿಗೊಳಿಸಿರುತ್ತದೆ.

2. ಅಲ್ಲದೆ, ವಿಶ್ವವಿದ್ಯಾನಿಲಯಗಳಲ್ಲಿ ಹಾಗೂ ಉನ್ನತ ಶಿಕ್ಷಣ ಸಂಸ್ಥೆಗಳಲ್ಲಿ ಬೋಧಕ ಹುದ್ದೆಗಳನ್ನು ಭರ್ತಿ ಮಾಡುವ ಸಂಬಂಧ ನಿಯಮಗಳನ್ನು ರಚಿಸಿರುತ್ತದೆ. ತತ್ಸಂಬಂಧ ಎಲ್ಲಾ ರಾಜ್ಯಗಳ ವಿಶ್ವವಿದ್ಯಾನಿಲಯಗಳಲ್ಲಿ ಬೋಧಕ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡುವ ಬಗ್ಗೆ ಹಾಗೂ ವೃತ್ತಿ ಪದೋನ್ನತಿ ನಿಯಮಗಳನುಸಾರ ಅರ್ಹ ಬೋಧಕರಿಗೆ ವೃತ್ತಿ ಪದೋನ್ನತಿ ನೀಡುವ ಸಂಬಂಧ – ಯುಜಿಸಿ ಪತ್ರ ಸಂಖ್ಯೆ:F.1-2/2017(ECPS), Dated:18.07.2018 ರನ್ವಯ ಎಲ್ಲಾ ರಾಜ್ಯಗಳ ಉನ್ನತ ಶಿಕ್ಷಣ ಇಲಾಖೆಯ ಪ್ರಧಾನ ಕಾರ್ಯದರ್ಶಿಗಳಿಗೆ ಮಾರ್ಗಸೂಚಿಗಳನ್ನು ಪರಿಚಲಿಸಿರುತ್ತದೆ.

3. ಯುಜಿಸಿ ಸಂಸ್ಥೆಯು ದಿನಾಂಕ:01.01.2016 ರಿಂದ ಜಾರಿಗೊಳಿಸಿರುವ 7ನೇ ಪರಿಷ್ಕೃತ ವೇತನ ಶ್ರೇಣಿಗಳು ಹಾಗೂ ರಾಜ್ಯ ಸರ್ಕಾರದ ವಿಶ್ವವಿದ್ಯಾನಿಲಯಗಳು ಮತ್ತು ಉನ್ನತ ಶಿಕ್ಷಣ ಸಂಸ್ಥೆಗಳಲ್ಲಿ ಪರಿಷ್ಕೃತ ವೇತನ ಶ್ರೇಣಿಗಳನ್ನು ಜಾರಿಗೊಳಿಸುವ ದಿಸೆಯಲ್ಲಿ ಹಾಗೂ ವಿವಿಧ ಸ್ತರದ ಬೋಧಕ ಹುದ್ದೆಗಳಿಗೆ ನೇಮಕ ಮಾಡುವಾಗ ಅನುಸರಿಸಬೇಕಾದ ಪ್ರಕ್ರಿಯೆಗಳನ್ನು ಪಾಲಿಸುವ ಸಂಬಂಧ ಸರ್ಕಾರದ ಉನ್ನತ ಶಿಕ್ಷಣ ಇಲಾಖೆಯ ಪತ್ರ ಸಂಖ್ಯೆ: No ED 483 UNE 2017, Dated:16.03.2019 ಸವಿವರ ಮಾರ್ಗಸೂಚಿಗಳನ್ನು ರಾಜ್ಯದ ಎಲ್ಲಾ ವಿಶ್ವವಿದ್ಯಾನಿಲಯಗಳಿಗೆ ಪರಿಚಲಿಸಿರುತ್ತದೆ ಹಾಗೂ ಸದರಿ ಮಾರ್ಗಸೂಚಿಗಳನ್ನು ಪರಿನಿಯಮಗಳಾಗಿ ಪರಿವರ್ತಿಸಿ ಸರ್ಕಾರದ ಮೂಲಕ ಘನತೆವೆತ್ತ ಕುಲಾಧಿಪತಿಗಳ ಅನುಮೋದನೆ ಪಡೆಯಲು ತಿಳಿಸಿರುತ್ತದೆ.

4. ಸರ್ಕಾರದ ಉನ್ನತ ಶಿಕ್ಷಣ ಇಲಾಖೆಯು ಪರಿಚಲಿಸಿರುವ ಮಾರ್ಗಸೂಚಿಗಳನ್ನು ವಿಶ್ವವಿದ್ಯಾನಿಲಯವು ಕರಡು ಪರಿನಿಯಮಗಳಾಗಿ ಪರಿವರ್ತಿಸಿ ಸರ್ಕಾರದ ಮೂಲಕ ಘನತೆವೆತ್ತ ಕುಲಾಧಿಪತಿಗಳ ಅನುಮೋದನೆಗೆ ವಿಶ್ವವಿದ್ಯಾನಿಲಯದ ಪತ್ರ ಸಂಖ್ಯೆ: ದಾವಿವಿ: ಪ್ರಾಧಿಕಾರ: 2019–20/9142, ದಿನಾಂಕ:07.01.2020 ರಂದು ಸಲ್ಲಿಸಲಾಗಿತ್ತು.

5. ಯುಜಿಸಿ ನಿಯಮಗಳನುಸಾರ ದಿನಾಂಕ:01.01.2016 ರಂದು ಜಾರಿಗೆ ಬಂದಿರುವ 7ನೇ ಪರಿಷ್ಕೃತ ವೇತನ ಶ್ರೇಣಿಯ ಮಾರ್ಗಸೂಚಿಗಳಿಗೆ ದಿನಾಂಕ:06.06.2020 ರಂದು ಘನತೆವೆತ್ತ ಕುಲಾಧಿಪತಿಗಳು ಅನುಮೋದನೆ ನೀಡಿದ್ದು, ತತ್ಸಂಬಂಧದ ಮಾಹಿತಿಯನ್ನು ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು ತಮ್ಮ ಪತ್ರ ಸಂಖ್ಯೆ: ಇಡಿ 148 ಯುಎನ್‌ಇ 2019, ದಿನಾಂಕ:24.06.2020 ರಂದು ವಿಶ್ವವಿದ್ಯಾನಿಲಯಕ್ಕೆ ತಿಳಿಸಿರುತ್ತಾರೆ.

6. ವಿಶ್ವವಿದ್ಯಾನಿಲಯದ ಹಾಗೂ ಉನ್ನತ ಶಿಕ್ಷಣ ಸಂಸ್ಥೆಗಳಲ್ಲಿ ಬೋಧಕ ಹುದ್ದೆಗಳನ್ನು ನೇಮಕ ಮಾಡುವ ಸಂಬಂಧ ಯುಜಿಸಿ ಪತ್ರ ಸಂಖ್ಯೆ:F.1-2/2017(EC/PS), Dated:18.07.2018 ರ ಮೂಲಕ ಪರಿಚಲಿಸಲಾಗಿರುವ ಮಾರ್ಗಸೂಚಿಗಳನ್ನು ಕರ್ನಾಟಕ ಉನ್ನತ ಶಿಕ್ಷಣ ಪರಿಷತ್ತು ಕೂಲಂಕುಷವಾಗಿ ಪರಿಶೀಲಿಸಿರುತ್ತದೆ.

ಕುಲಸಚಿವರು | ಕುಲಪತಿಗಳು

ಅಲ್ಲದೆ, ರಾಜ್ಯ ಸರ್ಕಾರದ ವಿಶ್ವವಿದ್ಯಾನಿಲಯಗಳು ಮತ್ತು ಉನ್ನತ ಶಿಕ್ಷಣ ಸಂಸ್ಥೆಗಳಲ್ಲಿ ಬೋಧಕರ ನೇಮಕಾತಿ ಸಂಬಂಧ ಕಟ್ಟುನಿಟ್ಟಾಗಿ ಅನುಸರಿಸಬೇಕಾದ ಏಕರೂಪದ ಕರಡು ಮಾದರಿ ಪರಿನಿಯಮಗಳನ್ನು ಸಿದ್ಧಪಡಿಸಿ, ವಿಶ್ವವಿದ್ಯಾನಿಲಯಗಳ ವತಿಯಿಂದ ಸೂಕ್ತ ಕ್ರಮ ಕೈಗೊಳ್ಳುವ ಬಗ್ಗೆ ತಿಳಿಸಿರುತ್ತದೆ.

7. ಕರ್ನಾಟಕ ಉನ್ನತ ಶಿಕ್ಷಣ ಪರಿಷತ್ತು, ಬೆಂಗಳೂರು ಇವರು ಸಿದ್ಧಪಡಿಸಿರುವ ಮಾದರಿ ಕರಡು ಪರಿನಿಯಮಗಳನ್ವಯ ಸಂಬಂಧಪಟ್ಟ ವಿಶ್ವವಿದ್ಯಾನಿಲಯಗಳು ಕರಡು ಪರಿನಿಯಮಗಳನ್ನು ರಚಿಸಿ, ಸರ್ಕಾರದ ಅನುಮೋದನೆಗಾಗಿ ಸಲ್ಲಿಸುವ ಬಗ್ಗೆ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಉನ್ನತ ಶಿಕ್ಷಣ ಇಲಾಖೆಯ ಪತ್ರ ಸಂಖ್ಯೆ: ಇಡಿ 309 ಯುಎನ್‌ಇ 2021, ದಿನಾಂಕ:26.07.2022ರಲ್ಲಿ ತಿಳಿಸಲಾಗಿದೆ.

8. ವಿಶ್ವವಿದ್ಯಾನಿಲಯದಲ್ಲಿ ಬೋಧಕ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡುವ ಸಂದರ್ಭಗಳಲ್ಲಿ ಹಾಗೂ ವೃತ್ತಿ ಪದೋನ್ನತಿ ನೀಡುವ ಸಂದರ್ಭಗಳಲ್ಲಿ ಅನುಸರಿಸಬೇಕಾದ ಮಾರ್ಗಸೂಚಿಗಳನ್ನು (Parameeters) ಸದರಿ ಕರಡು ಪರಿನಿಯಮಗಳ ಪುಟ ಸಂಖ್ಯೆ 46 ರಿಂದ 66 ರವರೆಗಿನ ಪುಟಗಳಲ್ಲಿ ತಿಳಿಸಲಾಗಿದೆ.

9. ಸದರಿ ಯುಜಿಸಿ ನಿಯಮಗಳನ್ನು ಅವಲೋಕಿಸಿ, ಮಾದರಿ ಪರಿನಿಯಮಗಳನ್ನು ಸಿದ್ಧಪಡಿಸಿ ಹಾಗೂ ಅನುಸರಿಸಬೇಕಾದ ಕ್ರಮಗಳ ಬಗ್ಗೆ ಉಲ್ಲೇಖಿಸಿ, ಕರ್ನಾಟಕ ಉನ್ನತ ಶಿಕ್ಷಣ ಪರಿಷತ್ತಿನ ಮಾನ್ಯ ಉಪಾಧ್ಯಕ್ಷರಾದ ಪ್ರೊ. ಬಿ. ತಿಮ್ಮೇಗೌಡ., ಇವರು ಸರ್ಕಾರದ ಪ್ರಧಾನ ಕಾರ್ಯದರ್ಶಿಗಳಿಗೆ ಕಳುಹಿಸಿರುವ ಪತ್ರದ ಪ್ರತಿಯನ್ನು ಸಹ ಮಾನ್ಯ ಸದಸ್ಯರ ಅವಗಾಹನೆಗಾಗಿ ಈ ಟಿಪ್ಪಣಿಗೆ ಲಗತ್ತಿಸಿದೆ.

ಮೇಲ್ಕಂಡ ಎಲ್ಲಾ ಮಾಹಿತಿಗಳನ್ನು/ಮಾರ್ಗಸೂಚಿಗಳನ್ನು ಸದರಿ ಕರಡು ಪರಿನಿಯಮಗಳಲ್ಲಿ ಸ್ಪಷ್ಟಪಡಿಸಲಾಗಿದ್ದು, ಸದರಿ ಕರಡು ಪರಿನಿಯಮಗಳನ್ನು ದಿನಾಂಕ:02.09.2022ರ ಹಣಕಾಸು ಸಭೆಯಲ್ಲಿ, ದಿನಾಂಕ:02.09.2022ರ ಸಿಂಡಿಕೇಟ್ ವಿಶೇಷ ಸಭೆ ಹಾಗೂ ದಿನಾಂಕ:03.09.2022ರ ವಿದ್ಯಾವಿಷಯಕ ಪರಿಷತ್ತಿನ ವಿಶೇಷ ಸಭೆಗಳ ಅನುಮೋದನೆಯೊಂದಿಗೆ ಸರ್ಕಾರಕ್ಕೆ ಸಲ್ಲಿಸಲಾಗಿತ್ತು.

ಆದರೆ, ಇ–ಕಛೇರಿ ಸಂಖ್ಯೆ:ಇಡಿ/489/ಯು.ಬಿ.ವಿ/2022 ದಿನಾಂಕ:08.12.2022ರ ಸರ್ಕಾರದ ಪತ್ರದಲ್ಲಿ ಸದರಿ ಪರಿನಿಯಮಗಳನ್ನು ನಿಯಮಾನುಸಾರ ಪರಿಶೀಲಿಸಲಾಗಿದೆ. ಅದರಂತೆ, ಸದರಿ ಪರಿನಿಯಮವನ್ನು ವಿಶ್ವವಿದ್ಯಾನಿಲಯದ ಹಂತದಲ್ಲಿ ಪರಿಶೀಲಿಸಿ, ಶಾಸನಬದ್ಧ ಪ್ರಾಧಿಕಾರಗಳ ಅನುಮೋದನೆಯನ್ನು ಪಡೆದು ಸರ್ಕಾರಕ್ಕೆ ಸಲ್ಲಿಸುವಂತೆ ತಿಳಿಸಲಾಗಿರುತ್ತದೆ. ಆದ್ದರಿಂದ, ದಿನಾಂಕ:17.12.2022ರ ಸಿಂಡಿಕೇಟ್ ವಿಶೇಷ ಸಭೆಗೆ ಮಂಡಿಸಲಾಗಿದೆ.

**ನಿರ್ಣಯ**

ಸಿಂಡಿಕೇಟ್ ಸಭೆಯು THE STATUTES RELATING TO APPOINTMENT AND PROMOTION OF TEACHERS AND OTHER ACADEMIC STAFF AND MEASURES FOR THE MAINTENANCE OF STANDARDS IN HIGHER EDUCATION IN THE DAVANGERE UNIVERSITY, AS PER THE UGC REGULATIONS -2018 ರ ಮಾದರಿ ಪರಿನಿಯಮಗಳಿಗೆ ಸಭೆಯು ಒಮ್ಮತದಿಂದ ಪರಿಶೀಲಿಸಿ ಅನುಮೋದಿಸಿತು.

ಕುಲಸಚಿವರು

ಕುಲಪತಿಗಳು

| ಮಾ.ಸ.ನಿ ವಿಭಾಗ | |
| --- | --- |
| ವಿಷಯ ಸಂಖ್ಯೆ: | ಸಿಂ.02(a)/(12/22) |

## -ಃಟಿಪ್ಪಣಿಃ-

**ವಿಷಯಃ** ವಿಶ್ವವಿದ್ಯಾನಿಲಯದ ಗ್ರಂಥಾಲಯಕ್ಕೆ ಸಲಹೆಗಾರರನ್ನು (Advisor) ನೇಮಕ ಮಾಡುವ ಬಗ್ಗೆ.

*****

ವಿಶ್ವವಿದ್ಯಾನಿಲಯದ ಗ್ರಂಥಾಲಯವನ್ನು ಡಿಜಿಟಲೀಕರಣ ಹಾಗೂ ಗ್ರಂಥಾಲಯದ ಸೇವೆಯನ್ನು ತಂತ್ರಜ್ಞಾನದ ಮೂಲಕ ಪಡೆಯಲು ವಿದ್ಯಾರ್ಥಿಗಳಿಗೆ, ಸಂಶೋಧಕರಿಗೆ, ಬೋಧನಾ ಸಿಬ್ಬಂದಿಗೆ ಅನುಕೂಲವಾಗುವಂತೆ ಮಾಡಬೇಕಾಗಿದೆ. ಅದರೆ, ವಿಶ್ವವಿದ್ಯಾನಿಲಯದಲ್ಲಿ ಕೇವಲ ಇಬ್ಬರು ಸಹಾಯಕ ಗ್ರಂಥಪಾಲಕರು ಮಾತ್ರ ಕಾರ್ಯನಿರ್ವಹಿಸು ತ್ತಿರುವುದರಿಂದ ಗ್ರಂಥಾಲಯವನ್ನು ಅಭಿವೃದ್ಧಿಗೊಳಿಸಲು ಸಾಧ್ಯವಾಗುತ್ತಿಲ್ಲ. ಆದ್ದರಿಂದ, ನುರಿತ ಗ್ರಂಥಾಲಯ ಸಲಹೆಗಾರರನ್ನು ನೇಮಿಸುವುದು ಅನಿವಾರ್ಯವಾಗಿರುತ್ತದೆ.

ಪ್ರೊ. ಮುತ್ತಯ್ಯ ಎಂ. ಕೊಗನೂರುಮಠ, ಡೀನರು ಹಾಗೂ ಪ್ರಾಧ್ಯಾಪಕರು, ಸ್ಕೂಲ್ ಆಫ್ ಲೈಬ್ರರಿ ಅಂಡ್ ಇನ್ಫಾರ್ಮೇಷನ್ ಸೈನ್ಸ್, ಸೆಂಟ್ರಲ್ ಯುನಿವೆರ್‌ಸಿಟಿ ಆಫ್ ಗುಜರಾತ್, ಗಾಂಧಿನಗರ – ಇವರು Library Networking and Resource Sharing, Knowledge Management, Digital Libraries ವಿಷಯಗಳಲ್ಲಿ ರಾಷ್ಟ್ರ ಹಾಗೂ ಅಂತರಾಷ್ಟ್ರೀಯ ಮಟ್ಟದಲ್ಲಿ 38 ವರ್ಷಗಳ ಸೇವಾನುಭವ ಹೊಂದಿರುತ್ತಾರೆ ಹಾಗೂ ವಿದೇಶಗಳಲ್ಲಿನ ವಿವಿಧ ಗ್ರಂಥಾಲಯಗಳಿಗೆ ಭೇಟಿ ನೀಡಿ ಗ್ರಂಥಾಲಯಗಳ ವಿವಿಧ ತಂತ್ರಜ್ಞಾನದ ಅನುಭವ ಹೊಂದಿದ್ದಾರೆ. ಆದ್ದರಿಂದ, ಸದರಿಯವರನ್ನು ವಿಶ್ವವಿದ್ಯಾನಿಲಯದ ಗ್ರಂಥಾಲಯಕ್ಕೆ ಸಲಹೆಗಾರರನ್ನಾಗಿ (Advisor) ನೇಮಕ ಮಾಡಲು ದಿನಾಂಕ:17.12.2022 ರ ಸಿಂಡಿಕೇಟ್ ವಿಶೇಷ ಸಭೆಯ ಅವಗಾಹನೆಗೆ ಹಾಗೂ ಅನುಮೋದನೆಗಾಗಿ ಸಲ್ಲಿಸಲಾಗಿದೆ.

### ನಿರ್ಣಯ

ಪ್ರೊ. ಮುತ್ತಯ್ಯ ಎಂ. ಕೊಗನೂರುಮಠ – ಇವರನ್ನು ವಿಶ್ವವಿದ್ಯಾನಿಲಯದ ಗ್ರಂಥಾಲಯಕ್ಕೆ ಸಲಹೆಗಾರರನ್ನಾಗಿ (Advisor) ನೇಮಕ ಮಾಡುವಂತೆ ಹಾಗೂ ಸದರಿಯವರು ವಿಶ್ವವಿದ್ಯಾನಿಲಯಕ್ಕೆ ಭೇಟಿ ನೀಡಿದಾಗ ಮಾತ್ರ ನಿಯಮಾನುಸಾರ ಸ್ಥಳೀಯ ಭತ್ಯೆ ಮತ್ತು ಪ್ರಯಾಣ ಭತ್ಯೆಗಳನ್ನು (Local Hospitality and TA) ನೀಡಲು ಸಭೆಯು ಒಮ್ಮತದಿಂದ ಅನುಮೋದನೆ ನೀಡಿತು.

ಕುಲಸಚಿವರು

ಕುಲಪತಿಗಳು

| ಮಾ.ಸ.ನಿ ವಿಭಾಗ | |
|---|---|
| ವಿಷಯ ಸಂಖ್ಯೆ: | ಸಿಂ.02(b)/(12/22) |

## –ಃಟಿಪ್ಪಣಿಃ–

**ವಿಷಯಃ** ವಿಶ್ವವಿದ್ಯಾನಿಲಯದ ಸ್ನಾತಕೋತ್ತರ ಅಧ್ಯಯನ ವಿಭಾಗಕ್ಕೆ ಹಂಗಾಮಿ ಪ್ರಾಧ್ಯಾಪಕರನ್ನಾಗಿ (Adjunct Professor) ನೇಮಿಸುವ ಕುರಿತು.

*****

Dr. H.M Virupakshaiah, Pro-Vice Chancellor, Khaja Bandanawaz University, Kalaburgi - ಇವರು ರಾಜ್ಯಶಾಸ್ತ್ರ ವಿಷಯದ ಕುರಿತಂತೆ ಹಲವಾರು ಅಧ್ಯಯನ ಹಾಗೂ ಸಂಶೋಧನೆಯನ್ನು ನಡಿಸಿ ರಾಜ್ಯಶಾಸ್ತ್ರ ವಿಷಯದಲ್ಲಿ ರಾಷ್ಟ್ರ ಹಾಗೂ ಅಂತರಾಷ್ಟ್ರೀಯ ಮಟ್ಟದಲ್ಲಿ ಪರಿಣಿತರಾಗಿದ್ದಾರೆ. ಹಲವಾರು ಅಂತರಾಷ್ಟ್ರೀಯ ಮಟ್ಟದ ವಿಶ್ವವಿದ್ಯಾನಿಲಯಗಳಿಗೆ ಭೇಟಿ ನೀಡಿ ಶೈಕ್ಷಣಿಕ ಚಟುವಟಿಕೆಗಳು, ಶೈಕ್ಷಣಿಕ ಸಾಧನೆಗಳನ್ನು ಮಾಡಿರುತ್ತಾರೆ. ಸದರಿಯವರು 52 ರಾಷ್ಟ್ರಗಳನ್ನು ಭೇಟಿ ಮಾಡುವ ಮೂಲಕ ರಾಜ್ಯಶಾಸ್ತ್ರ ವಿಷಯ ಕುರಿತಂತೆ ಅಧ್ಯಯನ ಮತ್ತು ಸಂಶೋದನೆ ಮಾಡಿರುತ್ತಾರೆ.

ಆದ್ದರಿಂದ, ವಿಶ್ವವಿದ್ಯಾನಿಲಯದ ಸ್ನಾತಕೋತ್ತರ ರಾಜ್ಯಶಾಸ್ತ್ರ ಅಧ್ಯಯನ ಮತ್ತು ಸಂಶೋಧನೆಗೆ ಸಂಬಂಧಿಸಿದಂತೆ ಕಿರಿಯ ಪ್ರಾಧ್ಯಾಪಕರುಗಳಿಗೆ ಹಾಗೂ ವಿದ್ಯಾರ್ಥಿಗಳಿಗೆ ಸದರಿಯವರ ಮಾರ್ಗದರ್ಶನ ಅವಶ್ಯಕತೆ ಇರುವುದರಿಂದ ವಿಶ್ವವಿದ್ಯಾನಿಲಯದ ಸ್ನಾತಕೋತ್ತರ ಅಧ್ಯಯನ ವಿಭಾಗಕ್ಕೆ ಹಂಗಾಮಿ ಪ್ರಾಧ್ಯಾಪಕರನ್ನಾಗಿ (Adjunct Professor) ನೇಮಿಸುವ ಸಂಬಂಧ ದಿನಾಂಕ:17.12.2022 ರ ಸಿಂಡಿಕೇಟ್ ವಿಶೇಷ ಸಭೆಯ ಅವಗಾಹನೆಗೆ ಹಾಗೂ ಅನುಮೋದನೆಗಾಗಿ ಸಲ್ಲಿಸಲಾಗಿದೆ.

### ನಿರ್ಣಯ

Dr. H.M Virupakshaiah, Pro-Vice Chancellor, Khaja Bandanawaz University, Kalaburgi – ಇವರನ್ನು ವಿಶ್ವವಿದ್ಯಾನಿಲಯದ ಸ್ನಾತಕೋತ್ತರ ಅಧ್ಯಯನ ವಿಭಾಗಕ್ಕೆ ಹಂಗಾಮಿ ಪ್ರಾಧ್ಯಾಪಕರನ್ನಾಗಿ (Adjunct Professor) ನೇಮಕ ಮಾಡುವಂತೆ ಹಾಗೂ ಸದರಿಯವರು ವಿಶ್ವವಿದ್ಯಾನಿಲಯಕ್ಕೆ ಭೇಟಿ ನೀಡಿದಾಗ ಮಾತ್ರ ನಿಯಮಾನುಸಾರ ಸ್ಥಳೀಯ ಭತ್ಯೆ ಮತ್ತು ಪ್ರಯಾಣ ಭತ್ಯೆಗಳನ್ನು (Local Hospitality and TA) ನೀಡಲು ಸಭೆಯು ಒಮ್ಮತದಿಂದ ಅನುಮೋದನೆ ನೀಡಿತು.

ಕುಲಸಚಿವರು

ಕುಲಪತಿಗಳು

| ಮಾ.ಸ.ನಿ ವಿಭಾಗ | |
|---|---|
| ವಿಷಯ ಸಂಖ್ಯೆ: | ಸಿಂ.02(c)/(12/22) |

**–ಃಟಿಪ್ಪಣಿಃ–**

**ವಿಷಯ :** ದಾವಣಗೆರೆ ವಿಶ್ವವಿದ್ಯಾನಿಲಯ ಸಂಶೋಧನಾರ್ಥಿಗಳ ಸಂಘ ರಚಿಸಿಕೊಳ್ಳುವ ಕುರಿತು.

**ಉಲ್ಲೇಖ :** 1. ಸಂಶೋಧನಾ ವಿದ್ಯಾರ್ಥಿಗಳ ಮನವಿ ದಿನಾಂಕಃ 02.11.2022
2. ಮಾನ್ಯ ಕುಲಪತಿಗಳ ನಿರ್ದೇಶನ ದಿನಾಂಕ: 28.11.2022.

*****

ರಾಜ್ಯದ ಬಹುತೇಕ ವಿಶ್ವವಿದ್ಯಾನಿಲಯಗಳಲ್ಲಿ ಸಂಶೋಧನೆಗೆ ಸಂಬಂಧಿಸಿದಂತೆ ಸಂಶೋಧನಾರ್ಥಿಗಳ ಸಂಘವಿದ್ದು, ಆ ಸಂಘಗಳು ವಿಶ್ವವಿದ್ಯಾನಿಲಯಗಳಲ್ಲಿ ಸಂಶೋಧನೆಗೆ ಸಂಬಂಧಿಸಿದ ವಿಚಾರ ಸಂಕಿರಣ ಮತ್ತು ಸಂಶೋಧನಾ ಕಾರ್ಯಗಾರಗಳು ಹಾಗೂ ಸಂಶೋಧನಾ ಕಾರ್ಯ ಚಟುವಟಿಕೆಗಳನ್ನು ನೆಡೆಸಿಕೊಂಡು ಹೊಗುವ ಹಿತದೃಷ್ಟಿಯಿಂದ ನಮ್ಮ ವಿಶ್ವವಿದ್ಯಾನಿಲಯದಲ್ಲಿ ಸಂಶೋಧನಾರ್ಥಿಗಳ ಸಂಘ ರಚಿಸಿಕೊಳ್ಳಲು ಸಂಶೋಧನಾರ್ಥಿಗಳು ಕೋರಿರುವ ಮನವಿಯ ಹಿನ್ನಲೆಯಲ್ಲಿ ದಿನಾಂಕ:17.12.2022ರ ಸಿಂಡಿಕೇಟ್ ವಿಶೇಷ ಸಭೆಯ ಅನುಮೋದನೆಗಾಗಿ ಮಂಡಿಸಲಾಗಿದೆ.

ನಿರ್ಣಯ

ವಿಶ್ವವಿದ್ಯಾನಿಲಯದ ಶೈಕ್ಷಣಿಕ ಚಟುವಟಿಕೆ ಹಾಗೂ ಸಂಶೋಧನೆಗೆ ಸಂಬಂಧಿಸಿದಂತೆ ಸಂಶೋಧನಾರ್ಥಿಗಳ ಸಂಘದ ವತಿಯಿಂದ ಯಾವುದೇ ಸಮಯದಲ್ಲಿ ವಿಶ್ವವಿದ್ಯಾನಿಲಯದ ಶೈಕ್ಷಣಿಕ ಹಾಗೂ ಸಂಶೋಧನೆ ಚಟುವಟಿಕೆಗಳಿಗೆ ತೊಂದರೆಯಾಗದಂತೆ ಈ ಸಂಘವು ವಿಶ್ವವಿದ್ಯಾನಿಲಯದ ಮತ್ತು ಸಿಂಡಿಕೇಟ್‌ನ ಅನಮೋದನೆ ಅಡಿಯಲ್ಲಿ ಕಾರ್ಯ ನಿರ್ವಹಿಸುವ ಷರತ್ತಿಗೊಳಪಟ್ಟು ಸಂಶೋಧನಾರ್ಥಿಗಳಿಗೆ ಸಂಘ ರಚಿಸಿಕೊಳ್ಳಲು ಸಭೆಯು ಒಮ್ಮತದಿಂದ ಅನುಮೋದನೆ ನೀಡಿತು.

ಕುಲಸಚಿವರು ಕುಲಪತಿಗಳು

| ಸಿ.ಡಿ.ಸಿ ವಿಭಾಗ | |
|---|---|
| ವಿಷಯ ಸಂಖ್ಯೆ: | ಸಿಂ.03(a)/(12/22) |

## –:ಟಿಪ್ಪಣಿ:–

ವಿಷಯ: ಎಂ.ಇ.ಎಸ್. ಶಿಕ್ಷಣ ಮಹಾವಿದ್ಯಾಲಯ, ದಾವಣಗೆರೆ – ಈ ಕಾಲೇಜಿಗೆ ಸ್ಥಳೀಯ ತಪಾಸಣಾ ಸಮಿತಿಯು ಭೇಟಿ ನೀಡುವ ಬಗ್ಗೆ.

ಉಲ್ಲೇಖ:
1. ಸರ್ಕಾರದ ಆದೇಶ ಸಂಖ್ಯೆ: ಇಡಿ 524 ಯುಬಿವಿ 2022, ದಿನಾಂಕ:28.11.2022..
1. ಕಾಲೇಜಿನ ಪತ್ರ ಸಂಖ್ಯೆ:ಎಂ.ಇ.ಎಸ್/ಬಿ.ಇಡಿ/499/2022-23, ದಿನಾಂಕ:30.11.2022.
2. ವಿಶ್ವವಿದ್ಯಾನಿಲಯದ ಪತ್ರ ಸಂಖ್ಯೆ: ದಾವಿವಿ/ಸಿಡಿಸಿ/ಸಂಯೋ-111/2022-23, ದಿನಾಂಕ:29.11.2022.
3. ಮಾನ್ಯ ಕುಲಪತಿಗಳ ಅನುಮೋದನೆ ದಿನಾಂಕ17.12.2022.

ಸರ್ಕಾರದ ಅಧೀನ ಕಾರ್ಯದರ್ಶಿ, ಉನ್ನತ ಶಿಕ್ಷಣ ಇಲಾಖೆ, ಬೆಂಗಳೂರು – ಇವರ ಉಲ್ಲೇಖ(2)ರ ನಿರ್ದೇಶಾನುಸಾರ, ಎಂ.ಇ.ಎಸ್. ಶಿಕ್ಷಣ ಮಹಾವಿದ್ಯಾಲಯ, ದಾವಣಗೆರೆ – ಇವರು ಉಲ್ಲೇಖಿತ(2) ಪತ್ರದಲ್ಲಿ, ಕಾಲೇಜಿನಲ್ಲಿ ಪ್ರಸ್ತುತ ಅಸ್ತಿತ್ವದಲ್ಲಿರುವ ಬಿ.ಇಡಿ., ಕೋರ್ಸಿನ 50 ಪ್ರವೇಶಮಿತಿಯೊಂದಿಗೆ 2022-23ನೇ ಶೈಕ್ಷಣಿಕ ಸಾಲಿನಿಂದ ಇನ್ನೂ ಹೆಚ್ಚುವರಿಯಾಗಿ 50 ವಿದ್ಯಾರ್ಥಿ ಪ್ರಮಾಣಮಿತಿಗೆ ಅನುಮತಿ ನೀಡುವ ಸಂಬಂಧ ಅರ್ಜಿಯನ್ನು ಸಲ್ಲಿಸಿರುತ್ತಾರೆ. ಈ ಸಂಬಂಧವಾಗಿ, ವಿಶ್ವವಿದ್ಯಾನಿಲಯದ ಸ್ಥಳೀಯ ತಪಾಸಣಾ ಸಮಿತಿಯು ಕಾಲೇಜಿಗೆ ಭೇಟಿ ನೀಡಿ ಭೌತಿಕ ಪರಿಶೀಲನೆ ನಡೆಸಲಾಗಿತ್ತು.

ಈ ಹಿನ್ನಲೆಯಲ್ಲಿ, ಉಲ್ಲೇಖ(2)ರಲ್ಲಿ, ಕಾಲೇಜಿನ ಭೌತಿಕ ಪರಿಶೀಲನೆ ನಡೆಸಲು ಈ ಕೆಳಕಂಡ ಸದಸ್ಯರನ್ನೊಳಗೊಂಡ ವಿಶ್ವವಿದ್ಯಾನಿಲಯದ ಸ್ಥಳೀಯ ಪರಿಶೀಲನಾ ಸಮಿತಿಯನ್ನು ದಿನಾಂಕ:07.12.2022ರಂದು ಕಾಲೇಜಿನ ಭೌತಿಕ ಪರಿಶೀಲನೆಗಾಗಿ ನಿಯೋಜಿಸಲಾಗಿತ್ತು.

| ಕ್ರ.ಸಂ. | ಹೆಸರು ಮತ್ತು ವಿಳಾಸ | ಸಂಯೋಜನಾ ಸಮಿತಿ |
|---|---|---|
| 1 | ಪ್ರೊ: ವೆಂಕಟೇಶ್.ಕೆ, ಡೀನರು ಶಿಕ್ಷಣ ನಿಕಾಯ, ದಾವಣಗೆರೆ ವಿಶ್ವವಿದ್ಯಾನಿಲಯ, ಶಿವಗಂಗೋತ್ರಿ, ದಾವಣಗೆರೆ. ದೂ.ಸಂ:+91 94486 30136 | ಅಧ್ಯಕ್ಷರು |
| 2 | ಡಾ. ಶಶಿಧರ್ ಆರ್. ಸಹ ಪ್ರಾಧ್ಯಾಪಕರು, ಸ್ನಾತಕೋತ್ತರ ಆಡಳಿತ ನಿರ್ವಹಣಶಾಸ್ತ್ರ ಅಧ್ಯಯನ ವಿಭಾಗ, ದಾವಣಗೆರೆ ವಿಶ್ವವಿದ್ಯಾನಿಲಯ, ಶಿವಗಂಗೋತ್ರಿ, ದಾವಣಗೆರೆ – 577 007. ದೂ.ಸಂ:+91 90086 66889 | ಸದಸ್ಯರು |
| 3 | ಡಾ. ಮುತ್ತನಗೌಡ ಕಳಸಾದ್. ಸಹ ಪ್ರಾಧ್ಯಾಪಕರು, ಭೌತಶಾಸ್ತ್ರ ಅಧ್ಯಯನ ವಿಭಾಗ, ದಾವಣಗೆರೆ ವಿಶ್ವವಿದ್ಯಾನಿಲಯ, ಶಿವಗಂಗೋತ್ರಿ, ದಾವಣಗೆರೆ – 577 007. ದೂ.ಸಂ: +91 77602 11316. | ಸದಸ್ಯರು |

ಈ ವಿಷಯವನ್ನು ದಿನಾಂಕ: 17.12.2022ರ ಸಿಂಡಿಕೇಟ್ ವಿಶೇಷ ಸಭೆಯ ಅವಗಾಹನೆಗೆ ಹಾಗೂ ಸ್ಥಿರೀಕರಣಕ್ಕಾಗಿ ಮಂಡಿಸಲಾಗಿದೆ.

**ನಿರ್ಣಯ**

ಎಂ.ಇ.ಎಸ್. ಶಿಕ್ಷಣ ಮಹಾವಿದ್ಯಾಲಯ, ದಾವಣಗೆರೆ – ಈ ಕಾಲೇಜಿಗೆ ಭೌತಿಕ ಪರಿಶೀಲನೆ ನಡೆಸಲು ಸ್ಥಳೀಯ ತಪಾಸಣಾ ಸಮಿತಿಯನ್ನು ರಚಿಸಿ ನಿಯೋಜಿಸಿರುವುದನ್ನು ಸಭೆಯು ಒಮ್ಮತದಿಂದ ಸ್ಥಿರೀಕರಿಸಿತು.

ಕುಲಸಚಿವರು

ಕುಲಪತಿಗಳು

| ಸಿ.ಡಿ.ಸಿ ವಿಭಾಗ | |
|---|---|
| ವಿಷಯ ಸಂಖ್ಯೆ: | ಸಿಂ.03(b)/(12/22) |

## -ಃಟಿಪ್ಪಣಿಃ-

ವಿಷಯ : ಎಂ.ಇ.ಎಸ್. ಶಿಕ್ಷಣ ಮಹಾವಿದ್ಯಾಲಯ, ದಾವಣಗೆರೆ - ಈ ಕಾಲೇಜಿನ ಭೌತಿಕ ಪರಿಶೀಲನೆ ನಡೆಸಿ ಸ್ಥಳೀಯ ತಪಾಸಣಾ ಸಮಿತಿಯು ಶಿಫಾರಸ್ಸು ನೀಡಿರುವ ಪರಿಶೀಲನಾ ವರದಿಯನ್ನು ಸರ್ಕಾರಕ್ಕೆ ಸಲ್ಲಿಸುವ ಕುರಿತು.

ಉಲ್ಲೇಖ : 1. ಸರ್ಕಾರದ ಪತ್ರ ಸಂ: ಇಡಿ 524 ಯುಬಿವಿ 2022, ದಿನಾಂಕ:28.11.2022 ಇಜಿಒವಿ 2020 (ಭಾಗ-2), ದಿನಾಂಕ:26.04.2022.

2. ವಿಶ್ವವಿದ್ಯಾನಿಲಯದ ಸುತ್ತೋಲೆ ಪತ್ರ ಸಂಖ್ಯೆ: ದಾವಿವಿ/ಸಿಡಿಸಿ/ ಸಂಯೋ-111/2022-23/, ದಿನಾಂಕ:29.11.2022.

****

ಉಲ್ಲೇಖಿತ(1)ರ ಪತ್ರದಲ್ಲಿ ವಿಶ್ವವಿದ್ಯಾನಿಲಯದ ಸಂಲಗ್ನಗೊಂಡ ಬಿ.ಇಡಿ., ಕಾಲೇಜುಗಳ 2022-23ನೇ ಶೈಕ್ಷಣಿಕ ಸಾಲಿನ ನವೀನ ಸಂಯೋಜನೆ/ ಮುಂದುವರಿಕೆ ಸಂಯೋಜನೆ/ ಶಾಶ್ವತ ಸಂಯೋಜನೆ ನವೀನ/ ಶಾಶ್ವತ ಸಂಯೋಜನೆ ಮುಂದುವರಿಕೆ/ ಶಾಶ್ವತ ಸಂಯೋಜನೆ ಭೌತಿಕ ಪರಿಶೀಲನೆ/ ಐಚ್ಛಿಕ ಸಮೂಹ/ ಹೆಚ್ಚುವರಿ/ ಪ್ರವೇಶ ಮಿತಿ ಹೆಚ್ಚಳಕ್ಕಾಗಿ ಕೋರಿ ಅರ್ಜಿಯನ್ನು ಅಹ್ವಾನಿಸಲಾಗಿತ್ತು.

ಈ ಸಂಬಂಧವಾಗಿ, ವಿಶ್ವವಿದ್ಯಾನಿಲಯದ ಸಂಲಗ್ನಗೊಂಡ ಎಂ.ಇ.ಎಸ್. ಶಿಕ್ಷಣ ಮಹಾವಿದ್ಯಾಲಯ, ದಾವಣಗೆರೆ - ಇವರು ತಮ್ಮ ಕಾಲೇಜಿನ 2022-23ನೇ ಶೈಕ್ಷಣಿಕ ಸಾಲಿಗೆ ಸಲ್ಲಿಸಲಾಗಿದ್ದ ಅರ್ಜಿಯ ಸಂಬಂಧ, ಕಾಲೇಜುಗಳ ಭೌತಿಕ ಪರಿಶೀಲನೆಗೆ ವಿಶ್ವವಿದ್ಯಾನಿಲಯದ ಪರಿಶೀಲನಾ ಸಮಿತಿಯನ್ನು ನಿಯೋಜಿಸಲಾಗಿತ್ತು. ವಿಶ್ವವಿದ್ಯಾನಿಲಯದ ಪರಿಶೀಲನಾ ಸಮಿತಿಯು ದಿನಾಂಕ:07.12.2022 ರಂದು ಸಂಯೋಜನೆ ಕುರಿತು ಭೌತಿಕ ಪರಿಶೀಲನೆಗಾಗಿ ಕಾಲೇಜಿನಗೆ ಭೇಟಿ ನೀಡಿ, ಪರಿಶೀಲನಾ ಸಮಿತಿಯು ತನ್ನ ಶಿಫಾರಸ್ಸು ವರದಿಯನ್ನು ಸಲ್ಲಿಸಿರುತ್ತವೆ.

ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ ಕಾಯ್ದೆ 2000, ಸೆಕ್ಷನ್ (59)ರನ್ವಯ ಸದರಿ ಪರಿಶೀಲನಾ ಸಮಿತಿ ಶಿಫಾರಸ್ಸು ವರದಿಗಳನ್ನು ವಿಶ್ವವಿದ್ಯಾನಿಲಯದ ಪ್ರಾಧಿಕಾರಗಳ ಅನುಮೋದನೆಯೊಂದಿಗೆ ಕ್ರೋಢೀಕೃತ ಸಂಯೋಜನಾ ವರದಿಯನ್ನು ಸರ್ಕಾರಕ್ಕೆ ಸಲ್ಲಿಸಬೇಕಾಗಿರುತ್ತದೆ.

ತತ್ಸಂಬಂಧ, ಈ ವಿಷಯವನ್ನು ದಿನಾಂಕ:17.12.2022ರಂದು ಏರ್ಪಡಿಸಿರುವ ಸಿಂಡಿಕೇಟ್ ವಿಶೇಷ ಸಭೆಯ ಅವಗಾಹನೆಗೆ ಹಾಗೂ ನಿರ್ಣಯಕ್ಕಾಗಿ ಮಂಡಿಸಲಾಗಿದೆ.

### ನಿರ್ಣಯ

ಎಂ.ಇ.ಎಸ್. ಶಿಕ್ಷಣ ಮಹಾವಿದ್ಯಾಲಯ, ದಾವಣಗೆರೆ - ಈ ಕಾಲೇಜಿನ ಭೌತಿಕ ಪರಿಶೀಲನೆ ನಡೆಸಿ ಸ್ಥಳೀಯ ತಪಾಸಣಾ ಸಮಿತಿಯು ಶಿಫಾರಸ್ಸು ನೀಡಿರುವ ಪರಿಶೀಲನಾ ವರದಿಯನ್ನು ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ ಕಾಯ್ದೆ 2000, ಸೆಕ್ಷನ್ (59)ರನ್ವಯ ಸದರಿ ಪರಿಶೀಲನಾ ಸಮಿತಿ ಶಿಫಾರಸ್ಸು ವರದಿಯನ್ನು ವಿಶ್ವವಿದ್ಯಾನಿಲಯದ ಪ್ರಾಧಿಕಾರಗಳ ಅನುಮೋದನೆಯೊಂದಿಗೆ ಕ್ರೋಢೀಕೃತ ಸಂಯೋಜನಾ ವರದಿಯನ್ನು ಸರ್ಕಾರಕ್ಕೆ ಸಲ್ಲಿಸಲು ಒಮ್ಮತದಿಂದ ಸಭೆಯು ಅನುಮೋದಿಸಿತು.

ಕೊನೆಯಲ್ಲಿ ಮಾನ್ಯ ಕುಲಸಚಿವರ ವಂದನಾರ್ಪಣೆಯೊಂದಿಗೆ ಸಭೆಯು ಮುಕ್ತಾಯಗೊಂಡಿತು.

ಕುಲಸಚಿವರು

ಕುಲಪತಿಗಳು